# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್.ರಸ್ತೆ, ತುಮಕೂರು - 572 103

ದೂರವಾಣಿ : 0816-2270715 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ.:ಹವಿ:2022–23 ದಿನಾಂಕ:12.02.2024

## ದರಪಟ್ಟಿ ಆಹ್ವಾನ (ವಿವಿ ವೆಬ್‌ಸೈಟ್)

ವಿಷಯ:–ತುಮಕೂರು ವಿಶ್ವವಿದ್ಯಾನಿಲಯದ 2021–22ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಪುಸ್ತಕ ರೂಪದಲ್ಲಿ ಮತ್ತು ವಿದ್ಯುನ್ಮಾನ ಪ್ರತಿ (Soft Copy) ಮುದ್ರಿಸಿ ಸರಬರಾಜು ಪಡೆಯಲು ದರಪಟ್ಟಿ ಆಹ್ವಾನಿಸಿರುವ ಕುರಿತು.

ಉಲ್ಲೇಖ:–ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:09.02.2024

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ 2021–22ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಗಳನ್ನು ಮತ್ತು ವಿದ್ಯುನ್ಮಾನ ಪ್ರತಿ (Soft Copy) ಮುದ್ರಿಸಿ ಸರಬರಾಜು ಪಡೆಯುವ ಸಂಬಂಧ ಈ ಕೆಳಕಂಡ ವಿವರಗಳಂತೆ, ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ನೊಂದಾಯಿತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರಸ | ವಾರ್ಷಿಕ ವರದಿಯ ವಿನ್ಯಾಸ ಮತ್ತು ಮುದ್ರಣ ವಿವರ | ಅಂದಾಜು ಪ್ರಮಾಣ | ಮುದ್ರಣದ ದರ ರೂ. (ಒಂದು ಪ್ರತಿಗೆ ಎಲ್ಲಾ ತೆರಿಗೆಗಳು ಸೇರಿದಂತೆ) |
|---|---|---|---|
| 1 | 2021-22 ಸಾಲಿನ ವಾರ್ಷಿಕ ವರದಿ (ಕನ್ನಡ ಆವೃತ್ತಿ)<br>Approximate pages: 100<br>(Approximately 70 inner pages single color printing)<br>Dimension 8½ 11 size<br>Paper : Maplitho paper 80 gsm<br>Cover 4 pages 300 gsm,<br>Multicolor print, art card with outer matt<br>Lamination Binding: Perfect Binding<br>Addition or deletion of two single color inner pages,<br>Addition or deletion of two multicolor inner pages | 100 | |
| 2 | Soft Copy CD | 325 | |

ಷರತ್ತು ಮತ್ತು ನಿಯಮಗಳು:

1. ಲಕೋಟೆ ಮೇಲೆ "ತುಮಕೂರು ವಿಶ್ವವಿದ್ಯಾನಿಲಯದ 2021–22ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿಗಳನ್ನು ಮುದ್ರಿಸಿ ಸರಬರಾಜು ಮಾಡಲು ದರಪಟ್ಟಿ" ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.
2. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 23.02.2024 ಅಪರಾಹ್ನ 05.00ಗಂಟೆ.
3. ದರಪಟ್ಟಿಯನ್ನು, ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್ ರಸ್ತೆ,ತುಮಕೂರು–572103 ಇವರಿಗೆ ಮುದ್ದಾಂ ಅಥವಾ ಅಂಚೆ ಮೂಲಕ ತಲುಪಿಸಬಹುದು. ಅಂಚೆಯ ವಿಳಂಭಕ್ಕೆ ಅಥವಾ ಅಂಚೆ ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗಿರುವುದಿಲ್ಲ.

(ಪು.ತಿ.ನೋ.)

4. ದರಪಟ್ಟಿಯನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸುವ ಅಥವಾ ಅಂಗೀಕರಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
5. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ **GSTIN No.** ಮತ್ತು **PAN No.** ದಾಖಲೆಗಳನ್ನು ದರಪಟ್ಟಿಯ ಜೊತೆ ಲಗತ್ತಿಸತಕ್ಕದ್ದು.
6. ವಿಶ್ವವಿದ್ಯಾನಿಲಯವು ಸೂಚಿಸುವ ಸ್ಥಳಕ್ಕೆ ಮುದ್ರಣ ಮಾಡಿದ ಲೆಕ್ಕಪರಿಶೋಧನಾ ವರದಿಗಳನ್ನು ಸರಬರಾಜು ಮಾಡುವುದು ಮತ್ತು ಸಾರಿಗೆ ವೆಚ್ಚವನ್ನು ಸರಬರಾಜುದಾರರೇ ಭರಿಸತಕ್ಕದ್ದು.
7. ದರಪಟ್ಟಿಯಲ್ಲಿ ನಮೂದಿಸಿರು ದರಗಳು ತೆರಿಗೆ, ಸಾಗಾಣಿಕಾ ವೆಚ್ಚ ಮತ್ತು ಇತರೆ ಸೇವೆಯ ಮೊತ್ತವನ್ನು ಒಳಗೊಂಡಿರತಕ್ಕದ್ದು.
8. ದರಪಟ್ಟಿಯಲ್ಲಿ ನಮೂದಿಸಿರುವ ಮುದ್ರಣದ ಪ್ರಮಾಣವನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
9. ತುಮಕೂರು ವಿಶ್ವವಿದ್ಯಾನಿಲಯದ 2021–22ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿಗಳನ್ನು ಸರಬರಾಜು ಆದೇಶ ನೀಡಿದ ಒಂದು ವಾರದೊಳಗಾಗಿ ಮುದ್ರಿಸಿ ಸರಬರಾಜು ಮಾಡತಕ್ಕದ್ದು.
10. ಲೆಕ್ಕಪರಿಶೋಧನಾ ವರದಿಗಳನ್ನು ಮುದ್ರಿಸಿ ಸರಬರಾಜು ಮಾಡಿದ ತರುವಾಯ 30 ದಿನಗಳೊಳಗಾಗಿ ಹುಂಡಿಯನ್ನು ಪಾವತಿಸಲು ಕ್ರಮ ವಹಿಸಲಾಗುವುದು.
11. ಷರತ್ತುಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
12. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
13. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯ ಅಗತ್ಯವಿದ್ದಲ್ಲಿ ಉಪಹಣಕಾಸು ಅಧಿಕಾರಿಗಳು/ ಅಧೀಕ್ಷಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ

ಹಣಕಾಸು ಅಧಿಕಾರಿಗಳು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು.

ಪ್ರತಿಗಳು:
1. ಮಾನ್ಯ ಕುಲಪತಿಗಳ ವಿಶೇಷಾಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು (ಇಂದೇ ವೆಬ್‌ಸೈಟಿನಲ್ಲಿ ಪ್ರಕಟಿಸುವುದು)
4. ರಕ್ಷಣಾ ಪ್ರತಿ.